**All India Radio: Bangalore**
**Regional Bulletin In Kannada**
**29.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.04.2025 / 2.30 p.m.**
**<><><><>**

ಮುಖ್ಯಾಂಶಗಳು

1. ಗ್ರಾಮ ಆಡಳಿತಾಧಿಕಾರಿಗಳಿಗೆ ನೇಮಕಾತಿ ಆದೇಶ ವಿತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ದೇಶದ ಭದ್ರತೆ ಪ್ರತಿಯೊಬ್ಬರ ಜವಾಬ್ದಾರಿ - ಗೃಹ ಸಚಿವ ಡಾ. ಜಿ. ಪರಮೇಶ್ವರ್
3. ಹಾವು ಕಡಿತದ ಮರಣಗಳ ಪರಿಶೋಧನೆ ಸಮಿತಿಗೆ ನಿಖರ ಮಾಹಿತಿ ನೀಡುವಂತೆ ಸರ್ಕಾರ ಸೂಚನೆ
4. ಪ್ರಾದೇಶಿಕ ಅಸಮತೋಲನ ನಿವಾರಣಾ ವರದಿ ಸೆಪ್ಟೆಂಬರ್ ನಲ್ಲಿ ಸಲ್ಲಿಸಲು ನಿರ್ಧಾರ
5. ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಯಲ್ಲಿ ಅಭ್ಯರ್ಥಿಗಳಿಗೆ ನ್ಯಾಯ ದೊರಕಿಸಿಕೊಡುವಂತೆ ಸಂಸದ ತೇಜಸ್ವಿ ಸೂರ್ಯ ಮನವಿ

<><><><>

ರೈತರಿಗೆ ಹಾಗೂ ಬಡಜನರಿಗೆ ಅನುಕೂಲವಾಗುವಂತೆ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಕಂದಾಯ ಇಲಾಖೆಯಲ್ಲಿ ನೂತನವಾಗಿ ಆಯ್ಕೆಯಾಗಿರುವ ೧ ಸಾವಿರ ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಕಾತಿ ಆದೇಶ ವಿತರಣೆ, ಅಭಿಶಿಕ್ಷಣ ತರಬೇತಿ ಮತ್ತು ೪ ಸಾವಿರ ಕ್ರೋಮ್ ಬುಕ್ ವಿತರಣೆ ಹಾಗೂ ಸಾಧನೆಯ ಹಾದಿಯಲ್ಲಿ ಪುಸ್ತಕ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಕಂದಾಯ ಇಲಾಖೆ ಜವಾಬ್ದಾರಿಯುತವಾದ ಇಲಾಖೆಯಾಗಿದ್ದು, ಜನರ ಕೆಲಸ ದೇವರ ಕೆಲಸ ಎಂಬಂತೆ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಕಿವಿ ಮಾತು ಹೇಳಿದರು.

**ಧ್ವನಿ : ಮುಖ್ಯಮಂತ್ರಿ (೩೯ ಸೆಕೆಂಡ್‌ಗಳು)**

<><><><>

ದೇಶದ ಭದ್ರತೆ ಪ್ರತಿಯೊಬ್ಬರ ಜವಾಬ್ದಾರಿ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಹಲ್ಗಾಮ್ ಘಟನೆಯ ಬಗ್ಗೆ ಹೆಚ್ಚು ವ್ಯಾಖ್ಯಾನ ಮಾಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ನಡೆದ ಘಟನೆ ಬಗ್ಗೆ ಪೂರ್ಣ ಮಾಹಿತಿ ಪಡೆದ ಬಳಿಕ ಪ್ರತಿಕ್ರಿಯಿಸುವುದಾಗಿ ಅವರು ಹೇಳಿದ್ದಾರೆ. ಬಿಜೆಪಿ ಮಹಿಳಾ ಮೋರ್ಚಾದ ಸದಸ್ಯರು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತಾಡುವಾಗ ಕಪ್ಪು ಬಟ್ಟೆ ಪ್ರದರ್ಶಿಸಿದ್ದಾರೆ. ಈ ವೇಳೆ ಲೋಪವಾಗಿರುವ ಬಗ್ಗೆ ಮಾಹಿತಿ ನೀಡುವಂತೆ ಕಾನೂನು ಸುವ್ಯವಸ್ಥೆ ಎಡಿಜಿಪಿಯವರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

<><><><>

ಹಾವು ಕಡಿತದಿಂದ ಉಂಟಾಗುವ ಸಾವುಗಳನ್ನು ಪ್ರತಿ ತ್ರೈಮಾಸಿಕದಲ್ಲಿ ಪರಿಶೋಧನೆಗೆ ಒಳಪಡಿಸುವಂತೆ ಎಲ್ಲಾ ಜಿಲ್ಲೆಗಳಿಗೆ ರಾಜ್ಯ ಆರೋಗ್ಯ ಇಲಾಖೆ ಸೂಚನೆ ನೀಡಿದೆ. ಈ ಸಂಬಂಧ ಆದೇಶ ಹೊರಡಿಸಿರುವ ಆರೋಗ್ಯ ಇಲಾಖೆ, ಹಾವು ಕಡಿತದಿಂದ ಸಂಭವಿಸುವ ಮರಣಗಳ ಲೆಕ್ಕ ಪರಿಶೋಧನೆಯ ಜವಾಬ್ದಾರಿಯನ್ನು 'ಎಚ್‌೧ಎನ್‌೧ ಮರಣದ ಲೆಕ್ಕ ಪರಿಶೋಧನಾ ಸಮಿತಿ'ಗೆ ವಹಿಸಲಾಗಿದೆ. ಲೆಕ್ಕ ಪರಿಶೋಧನೆಯನ್ನು ಪರಿಶೀಲಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ

ನೀಡಲಾಗಿದೆ. ಹಾವು ಕಡಿತ ಪ್ರಕರಣಗಳ ಪರಿಶೀಲನಾ ಸಭೆಯನ್ನು ಮೂರು ತಿಂಗಳಿಗೊಮ್ಮೆ ಮಾಡಬೇಕು. ತಡೆಗಟ್ಟುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕು ಎಂದು ಸರ್ಕಾರ ಸೂಚನೆ ನೀಡಿದೆ.

<><><>

ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತು ರಾಜ್ಯದಾದ್ಯಂತ ಮಾಹಿತಿ ಸಂಗ್ರಹಿಸಿ ಸೆಪ್ಟೆಂಬರ್ ವೇಳೆಗೆ ಶಿಫಾರಸು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ಅಧ್ಯಕ್ಷ ಹಾಗೂ ಆರ್ಥಿಕ ತಜ್ಞ ಪ್ರೊ ಎಂ.ಗೋವಿಂದ ರಾವ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಂವಾದ ಸಭೆ ಹಾಗೂ ಸಾರ್ವಜನಿಕ ಶಿಫಾರಸು ಸ್ವೀಕಾರ ಸಭೆಯಲ್ಲಿ ಮಾತನಾಡಿದ ಅವರು, ನಂಜುಂಡಪ್ಪ ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಿ ೨೫ ವರ್ಷಗಳು ಕಳೆದಿದ್ದು, ರಾಜ್ಯದ ಇಂದಿನ ಸ್ಥಿತಿ ಬದಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಯಲ್ಲಿ ಪ್ರವಾಸ ಮಾಡಿ ಮಾಹಿತಿ ಸಂಗ್ರಹಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

**ಧ್ವನಿ : ಗೋವಿಂದರಾವ್ (೩೦ ಸೆಕೆಂಡ್‌ಗಳು)**

<><><>

ಭಾರತದಲ್ಲಿ ಸೂಕ್ಷ್ಮಾಣುಗ್ರಸ್ತ ರೋಗಗಳಿಗೆ ಉಪಶಮನ ಕಂಡುಹಿಡಿದ ೯ ನಾವೀನ್ಯತೆಯ ನವೋದ್ಯಮಗಳಿಗೆ ಭಾರತದ ಜೀವಕೋಶ ಹಾಗೂ ಅಣು ಸಂಶೋಧನಾ ವೇದಿಕೆ ಹಾಗೂ ಬ್ರಿಟನ್‌ನ ಆರೋಗ್ಯ ಮತ್ತು ಸಾಮಾಜಿಕ ಇಲಾಖೆಯ ಜಾಗತಿಕ ಸಂಶೋಧನಾ ಸಂಸ್ಥೆ ಮಾನ್ಯತೆ ಪ್ರಕಟಿಸಿದೆ. ೨೦೨೪-೨೫ರ ಸಾಲಿಗೆ ಈ ಎರಡು ಸಂಸ್ಥೆಗಳು ಸೂಕ್ಷ್ಮಾಣುಗ್ರಸ್ತ ರೋಗಗಳಿಗೆ ಪರಿಹಾರ ಕಂಡುಕೊಳ್ಳುವ ಸಂಸ್ಥೆಗಳನ್ನು ಪ್ರೋತ್ಸಾಹಿಸಲು ಸ್ಪರ್ಧೆಯನ್ನು ಏರ್ಪಡಿಸಿತ್ತು. ಈ ಸ್ಪರ್ಧೆಯಲ್ಲಿ ಭಾರತದ ೯ ನವೋದ್ಯಮಗಳು ಆಯ್ಕೆಯಾಗಿವೆ ಎಂದು ಅಣು ಸಂಶೋಧನಾ ವೇದಿಕೆ ನಿರ್ದೇಶಕ ಡಾ. ತಸ್ಲೀಮಾರೀಫ್ ಸಯ್ಯದ್ ತಿಳಿಸಿದ್ದಾರೆ. ಈ ನವೋದ್ಯಮಗಳು ಕಂಡುಹಿಡಿದ ಪರಿಹಾರಗಳನ್ನು ಆಸ್ಪತ್ರೆ ಮತ್ತು ಅನ್ಯ ಚಿಕಿತ್ಸಾ ಕೇಂದ್ರಗಳಲ್ಲಿ ಅಳವಡಿಸಲು ಸಂಸ್ಥೆ ಸಕ್ರಿಯ ಪಾತ್ರ ವಹಿಸಲಿದೆ ಎಂದು ಅವರು ತಿಳಿಸಿದರು. ಭಾರತ ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರ ಮಾರ್ಗದರ್ಶನದಂತೆ ದೇಶದಲ್ಲಿ ಸೂಕ್ಷ್ಮಾಣುಗ್ರಸ್ತ ರೋಗಗಳನ್ನು ನಿಗ್ರಹಿಸುವ ಎಲ್ಲ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಅವರು ಹೇಳಿದರು. ಬ್ರಿಟನ್‌ನ ಆರೋಗ್ಯ ಮತ್ತು ಸಾಮಾಜಿಕ ಇಲಾಖೆಯ ಜಾಗತಿಕ ಸಂಶೋಧನಾ ಸಂಸ್ಥೆ ಒಗ್ಗೂಡಿ ಪರಿಹಾರಗಳ ಅನುಷ್ಠಾನಕ್ಕೆ ಆರ್ಥಿಕ ನೆರವು ಪಡೆಯುವ ಆಶಯವಿದೆ ಎಂದು ಡಾ. ಸಯ್ಯದ್ ಸ್ಪಷ್ಟಪಡಿಸಿದರು.

<><><>

ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ ಪರೀಕ್ಷೆಯಲ್ಲಿ ಸಾವಿರಾರು ಬಡ ಹಾಗೂ ಗ್ರಾಮೀಣ ಅಭ್ಯರ್ಥಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸುವಂತೆ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಒತ್ತಾಯಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಮಧ್ಯಪ್ರವೇಶಿಸಿ ನ್ಯಾಯ ದೊರಕಿಸಿ ಕೊಡುವಂತೆ ಮನವಿ ಮಾಡಿದ್ದಾರೆ. ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ ಕೇವಲ ೩೪ ಅಭ್ಯರ್ಥಿಗಳಿಗೆ ಮಾತ್ರ ಮೇ ಮೊದಲ ವಾರದಲ್ಲಿ ನಡೆಯಲಿರುವ ಮುಖ್ಯ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿದ್ದು, ಇದರಿಂದ ೭೦ ಸಾವಿರಕ್ಕೂ ಅಧಿಕ ಅಭ್ಯರ್ಥಿಗಳಿಗೆ ಅನ್ಯಾಯವಾಗಿದೆ ಎಂದು ಸರ್ಕಾರದ ಗಮನ ಸೆಳೆದಿದ್ದಾರೆ.

<><><>

ಮೇ ೫ ರಿಂದ ೧೭ರವರೆಗೆ ನಡೆಯುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷಾ ಕಾರ್ಯದಲ್ಲಿ ಗಣತಿದಾರರು ಅತ್ಯಂತ ಜವಾಬ್ದಾರಿಯಿಂದ ಹಾಗೂ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸುವಂತೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಸೂಚನೆ ನೀಡಿದ್ದಾರೆ. ಸಮೀಕ್ಷೆಯಲ್ಲಿ ಯಾವುದೇ ಗೊಂದಲ ಉಂಟಾಗದಂತೆ ನಿಖರ ಅಂಕಿ ಅಂಶಗಳನ್ನು ದಾಖಲು ಮಾಡುವಂತೆ ತಿಳಿಸಿದ್ದಾರೆ. ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಸಮೀಕ್ಷೆಗೆ ಸಂಬಂಧಿಸಿದಂತೆ ರಾಯಚೂರು ಜಿಲ್ಲೆಯಲ್ಲಿ ಮತದಾರರ ಪಟ್ಟಿಯಲ್ಲಿರುವ ಮನೆ ವಿಳಾಸಗಳ ಆಧಾರದ ಮೇಲೆ ಭೇಟಿ ನೀಡಿ, ಪರಿಶಿಷ್ಟ ಜಾತಿಯ ಕುಟುಂಬಗಳನ್ನು ಗುರುತಿಸಬೇಕು. ಯಾವ ದಿನದಂದು, ಯಾವ ಯಾವ ಮನೆಗಳನ್ನು ಸಮೀಕ್ಷೆಗೆ ಒಳಪಡಿಸಲಾಗುವುದು ಎಂಬ ಮಾಹಿತಿಯನ್ನು ಆದಷ್ಟು ಮಟ್ಟಿಗೆ ಮುಂಚಿತವಾಗಿಯೆ ಗೊತ್ತುಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ ಸೂಚಿಸಿದ್ದಾರೆ. ಬಳ್ಳಾರಿ ಜಿಲ್ಲೆಯಲ್ಲಿ ಸಮೀಕ್ಷಾ ಕಾರ್ಯವನ್ನು ವ್ಯವಸ್ಥಿತವಾಗಿ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಸಮೀಕ್ಷಾ ಕಾರ್ಯದ ಸಿಬ್ಬಂದಿಗೆ ಸೂಚಿಸಿದ್ದಾರೆ. ಯಾವುದೇ ಕುಟುಂಬ ಈ ಸಮೀಕ್ಷೆಯಿಂದ ವಂಚಿತರಾಗದಂತೆ ಕಾರ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

<><><><>

ಬಳ್ಳಾರಿ ಜಿಲ್ಲೆಯ ೨ ತಾಲ್ಲೂಕು ಆಸ್ಪತ್ರೆ, ೭ ಸಮುದಾಯ ಆರೋಗ್ಯ ಕೇಂದ್ರ, ೨೯ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ೯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇಸಿಜಿ ಯಂತ್ರದ ವ್ಯವಸ್ಥೆ ಮಾಡಲಾಗಿದ್ದು, ತಜ್ಞರು ಹಾಗೂ ತರಬೇತಿ ಪಡೆದ ವೈದ್ಯರು ಪರೀಕ್ಷೆ ಮಾಡಲಿದ್ದಾರೆ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ. ಕಂಪ್ಲಿ ತಾಲೂಕಿನ ಎಮ್ಮಿಗನೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇಸಿಜಿ  ಪರೀಕ್ಷಾ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆ ಮಾಡಿದಾಗ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ತಕ್ಷಣ ತಾಲೂಕು ಮಟ್ಟದ ಅಸ್ಪತ್ರೆಗೆ ದಾಖಲಿಸಬೇಕು ಎಂದು ಸೂಚಿಸಿದ್ದಾರೆ.

ಜಿಲ್ಲಾಸ್ಪತ್ರೆಯಲ್ಲಿ ತಜ್ಞರು ಅಳವಡಿಸಿರುವ ಟೆಲಿ ಐಸಿಯು ಹಬ್‌ನ ತಜ್ಞವೈದ್ಯರಿಗೆ ನೇರವಾಗಿ ರೋಗಿಯನ್ನು ವಿಡಿಯೋ ಮೂಲಕ ಸಂಪರ್ಕಿಸಿ ಚಿಕಿತ್ಸೆ  ನೀಡಲಾಗುವುದು ಎಂದು ತಿಳಿಸಿದ್ದಾರೆ.

<><><><>

ಸಾರ್ವಜನಿಕರು ಕೆ.ಎಸ್.ಎನ್.ಡಿ.ಎಂ.ಸಿ. ವರುಣ ಮಿತ್ರ ಸಹಾಯವಾಣಿ ೯೨೪೩೩೪೫೪೩೩ಯನ್ನು ಸಂಪರ್ಕಿಸಿ ಹವಾಮಾನ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು  ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ. ತಿಳಿಸಿದ್ದಾರೆ.

ಗುಡುಗು ಸಿಡಿಲಿನ ಮುನ್ನೆಚ್ಚರಿಕೆಗಳನ್ನು ಕೆ.ಎಸ್.ಎನ್.ಡಿ.ಎಂ.ಸಿ ಅಭಿವೃದ್ಧಿಪಡಿಸಿರುವ ಸಿಡಿಲು ಆಪ್‌ನಲ್ಲಿ ಪಡೆಯಬಹುದು. ಅಥವಾ ಎನ್‌ಡಿಎಂಎ ಅಭಿವೃದ್ಧಿಪಡಿಸಿರುವ ದಾಮಿನಿ ಆಪ್ ಅಳವಡಿಸಿಕೊಳ್ಳಬಹುದು. ಇದರಲ್ಲಿ ಸಿಡಿಲು ಯಾವ ಪ್ರದೇಶದಲ್ಲಿ ಬರುವ ಸಾಧ್ಯತೆಯಿದೆ ಎಂಬುದರ ಕುರಿತು ೩೦ ನಿಮಿಷಗಳ ಮೊದಲೇ ಮುನ್ಸೂಚನೆ ಪಡೆಯಬಹುದು. ಸಿಡಿಲಿನ ಅಪಾಯದಿಂದ ತಪ್ಪಿಸಿಕೊಳ್ಳಲು ಅಗತ್ಯ  ಸಲಹೆ, ಸೂಚನೆಗಳನ್ನು ಆಪ್‌ನಲ್ಲಿ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ರಕ್ಷಣಾ ಸಚಿವಾಲಯದ ಸಾರ್ವಜನಿಕ ಸಂಪರ್ಕ ನಿರ್ದೇಶನಾಲಯ ಯುವ ರಕ್ಷಣಾ ಇಲಾಖೆಯ ಬಗ್ಗೆ ವರದಿ ಮಾಡುವ ಪತ್ರಕರ್ತರಿಗೆ ರಕ್ಷಣಾ ಸಂಸ್ಥೆಗಳ ಬಗ್ಗೆ ಅರಿವು ಮೂಡಿಸಲು ಒಂದು ತಿಂಗಳ ತರಬೇತಿ ನಡೆಸಲು ನಿರ್ಧರಿಸಿದೆ.
2. ಉತ್ತರಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಶಂಕರಾಚಾರ್ಯ ಜಯಂತಿಯನ್ನು ಮೇ ೨ ರಂದು ಕಾರವಾರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.
3. ಚಿತ್ರದುರ್ಗ ಜಿಲ್ಲೆಯಲ್ಲಿ ಮಕ್ಕಳು ಲಸಿಕೆಯಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಲಸಿಕಾ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>